**ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,**
ದೇವರಾಜ ಅರಸ್ ಮಾರ್ಕೆಟ್, ಹಾಸನ. ☐ 264825

| ವಾರ್ಷಿಕ ಬಡ್ಡಿ ದರದ ವಿವರಗಳು | ಸಾಮಾನ್ಯರಿಗೆ % | ಹಿರಿಯ ನಾಗರಿಕರಿಗೆ % |
|---|---|---|
| * 1 ವರ್ಷದಿಂದ 3 ವರ್ಷಗಳವರೆಗೆ | 10.5 | 11 |
| * 181ದಿನಗಳಿಂದ 365 ದಿನಗಳವರೆಗೆ | 8 | 8.5 |
| * 91 ದಿನಗಳಿಂದ 180 ದಿನಗಳವರೆಗೆ | 7 | 7.5 |
| * 31 ದಿನಗಳಿಂದ 90 ದಿನಗಳವರೆಗೆ | 6 | 6.5 |
| * 90 ತಿಂಗಳುಗಳಲ್ಲಿ ಶೇವಗೆ ಮೊತ್ತ ದ್ವಿಗುಣ | | |

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ



41ನೇ ವರ್ಷದಲ್ಲಿ

# ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ
ವ್ಯವಸ್ಥಾಪಕ ಸಂಪಾದಕ :ಎಸ್.ಎಂ.ಮಂಜುನಾಥಗುಪ್ತ



PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner

## ನನಗೆ ಮಾತ್ರವೇಕೆ ಹೆಚ್ಚು ಬಹುಮಾನ?: ದ್ರಾವಿಡ್ ಬೇಸರ

ನಾಲ್ಕನೇ ಬಾರಿ 19 ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್ ಜಯಿಸಿದ ಭಾರತ ತಂಡಕ್ಕೆ ನೀಡಿದ ನಗದು ಬಹುಮಾನದಲ್ಲಿ ತಾರತಮ್ಯ ಎಸಗಿರುವ ಬಗ್ಗೆ ತಂಡದ ಪ್ರಧಾನ ಕೋಚ್ ರಾಹುಲ್ ದ್ರಾವಿಡ್ ಬೇಸರ ವ್ಯಕ್ತಪಡಿಸಿದ್ದಾರೆ. ವಿಜೇತ ತಂಡದ ಪ್ರಧಾನ ಕೋಚ್ ರಾಹುಲ್ ದ್ರಾವಿಡ್‌ಗೆ ರೂ.50 ಲಕ್ಷ, ಸಹಾಯಕ ಸಿಬ್ಬಂದಿಗೆ 20 ಲಕ್ಷ ಮತ್ತು ಆಟಗಾರರಿಗೆ 30 ಲಕ್ಷ ರೂ. ನಗದು ಬಹುಮಾನವನ್ನು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಘೋಷಿಸಿತ್ತು. ಸಹಾಯಕ ಸಿಬ್ಬಂದಿಗೆ ಕಡಿಮೆ ನಗದು ಬಹುಮಾನ ನೀಡಿ ತಮಗೆ ಮಾತ್ರ ಹೆಚ್ಚು ಘೋಷಿಸಿದ್ದಕ್ಕೆ ದ್ರಾವಿಡ್ ಬೇಸರಗೊಂಡಿದ್ದಾರೆ.

## ಪಾರ್ಟಿಯಲ್ಲಿ ರಂಜಿಸಲು ಒಪ್ಪದ ನಟಿಗೆ ಗುಂಡಿಕ್ಕಿ ಹತ್ಯೆ

ಪ್ರತಿಷ್ಠಿತ ಖಾಸಗಿ ಪಾರ್ಟಿಯೊಂದರಲ್ಲಿ ಪಾಲ್ಗೊಂಡು ರಂಜಿಸಲು ಒಪ್ಪದ ಪಾಕ್ ನಟಿಯೊಬ್ಬರನ್ನು ಗುಂಡಿಕ್ಕಿ ಕೊಂದಿರುವ ಪ್ರಕರಣ ಬೆಳಕಿಗೆ ಬಂದಿದೆ. ಪಾಕಿಸ್ತಾನದ ಶ್ರೇಷ್ಠ ನಟಿ ಹಾಗೂ ಗಾಯಕಿ ಸಂಬುಲ್(25) ದುಷ್ಕರ್ಮಿಯೊಬ್ಬರಿಂದ ಹತ್ಯೆಯಾದ ನಟಿ. ಲಾಹೋರ್‌ನ ಶೇಖ್ ಮುಲ್ತಾನ್‌ನಲ್ಲಿರುವ ಸಂಬುಲ್ ನಿವಾಸದಲ್ಲೇ ದುಷ್ಕರ್ಮಿಗಳು ಈ ಕೃತ್ಯ ಎಸಗಿದ್ದಾರೆ.



## ಮತ್ತಷ್ಟು ಸಂಕಷ್ಟಗಳ ಸುಳಿಯಲ್ಲಿ ಕುಲಭೂಷಣ್ ಜಾಧವ್

ಬೇಹುಗಾರಿಕೆ ಆರೋಪದ ಮೇಲೆ ಪಾಕಿಸ್ತಾನ ಸೇನಾ ನ್ಯಾಯಾಲಯದಿಂದ ಈಗಾಗಲೇ ಮರಣದಂಡನೆಗೆ ಗುರಿಯಾಗಿರುವ ಭಾರತದ ನಿವೃತ್ತ ನೌಕಾಧಿಕಾರಿ ಕುಲಭೂಷಣ್ ಜಾಧವ್ ಈಗ ಮತ್ತಷ್ಟು ಸಂಕಷ್ಟಗಳ ಸುಳಿಯಲ್ಲಿ ಸಿಲುಕಿದ್ದಾರೆ. ನೇಣುಗಂಬದ ಕರಾಳ ಛಾಯೆಯಲ್ಲಿರುವ ಯಾದವ್ ಈಗ ಭಯೋತ್ಪಾದನೆ ಮತ್ತು ವಿಧ್ವಂಸಕ ಕೃತ್ಯಗಳಿಗೆ ಸಂಬಂಧಪಟ್ಟ ಅನೇಕ ಆರೋಪಗಳನ್ನು ಎದುರಿಸುತ್ತಿದ್ದಾರೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ.


ಜನತಾಮಾಧ್ಯಮ ಬೆಳಗಿನ ದೈನಿಕ | JANATHAMADHYAMA | KARKAN. RNI 41566. | ಸಂಪುಟ : 41 | ಸಂಚಿಕೆ :76 | ಬುಧವಾರ ಫೆ.7, 2018 | ದೂರವಾಣಿ : 268494 | ಪುಟ-4 | ರೂ.2-00 | NO. HSN-761/ 2018-20


# ವಿರಾಟ ವಿರಾಗಿಯ ಮಹಾ ಮಜ್ಜನಕ್ಕೆ ಬೆಳಗೊಳ ಶೃಂಗಾರ

## ☐ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರಿಂದ ಮಹೋತ್ಸವಕ್ಕೆ ಇಂದು ಚಾಲನೆ

**ಹಾಸನ : ವಿರಾಟ ವಿರಾಗಿಯ ಮಹಾ ಮಜ್ಜನಕ್ಕೆ ಶ್ರವಣಬೆಳಗೊಳ ಸಿಂಗಾರಗೊಂಡಿದ್ದು, ಮಹಾ ಮಸ್ತಕಾಭಿಷೇಕ ಮಹೋತ್ಸವಕ್ಕೆ ಬುಧವಾರ ಚಾಲನೆ ದೊರೆಯಲಿದೆ.**

ರಾಷ್ಟ್ರಪತಿ ರಾಮನಾಥ್ ಕೋವಿಂದ್, ರಾಜ್ಯಪಾಲ ವಜುಬಾಯಿ ವಾಲಾ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನಿತರೆ ಗಣ್ಯರು ಶ್ರವಣಬೆಳಗೊಳದಲ್ಲಿ ನಡೆಯುವ ಮಹೋತ್ಸವ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಫೆಬ್ರವರಿ 7 ರಿಂದ 25ರವರೆಗೆ ಮಸ್ತಕಾಭಿಷೇಕ ನಡೆಯಲಿದೆ. ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಬೆಳಿಗ್ಗೆ 10.30ಕ್ಕೆ ಶ್ರವಣಬೆಳಗೊಳಕ್ಕೆ ಆಗಮಿಸುವರು. 11.45ರ ತನಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಂತರ ವಿಶೇಷ ವಾಹನದಲ್ಲಿ ಹಿಂದಿರುಗಲಿದ್ದಾರೆ.

ಈಗಾಗಲೇ ಭಕ್ತಾದಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆಕೈಗೊಳ್ಳಲಾಗಿದೆ. ಬೆಳಗೊಳಕ್ಕೆ ಬರಲು 23 ವಿಶೇಷ ರೈಲುಗಳ ಸಂಚಾರ ವ್ಯವಸ್ಥೆಕಲ್ಪಿಸಲಾಗಿದೆ. 400 ಸಾರಿಗೆ ಬಸ್‌ಗಳು ಇಲ್ಲಿ ಓಡಾಡಲಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸಂಜೆ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಮಹಾ ಮಜ್ಜನ ವೀಕ್ಷಣೆಗೆ ಐದೂವರೆ ಸಾವಿರ ಜನರಿಗೆ ಅವಕಾಶ ಕಲ್ಪಿಸಲಾಗಿದೆ. ವಿಶೇಷ ಅಟ್ಟಣಿಗೆಯಲ್ಲಿ ಕುಳಿತು ಕಾರ್ಯಕ್ರಮ ವೀಕ್ಷಿಸಬಹುದು. ಸಾರ್ವಜನಿಕರಿಗೂ ಈ ಅವಕಾಶ ಕಲ್ಪಿಸುವ ಕುರಿತು ಚಿಂತನೆ ನಡೆಸಲಾಗಿದೆ. ಸಾರ್ವಜನಿಕರು ಕೂಡ ಮಹಾ ಮಜ್ಜನವನ್ನು ಕಣ್ತುಂಬಿಕೊಳ್ಳಬೇಕೆಂದು ಮನವಿ ಮಾಡಿದರು.

ಮಸ್ತಕಾಭಿಷೇಕಕ್ಕೆ ಹಣಕಾಸಿನ ಕೊರತೆ ಇಲ್ಲ. ಇನ್ನೂ ಆಗತ್ಯ ಅನುದಾನವನ್ನು ರಾಜ್ಯ ಸರ್ಕಾರವೇ ಭರಿಸಲಿದೆ. ಕಾರ್ಯಕ್ರಮದಲ್ಲಿ ಎಲ್ಲಿಯೂ ಲೋಪವಾಗದಂತೆ ಎಚ್ಚರ ವಹಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಯಾವುದೇ ತೊಂದರೆ ಇದ್ದರೆ ತಮಗೆ ತಿಳಿಸಬೇಕು ಎಂದು ಹೇಳಿದ್ದಾರೆ ಎಂದು ಎ.ಮಂಜು ಸ್ಪಷ್ಟಪಡಿಸಿದರು.

### ಮಹೋತ್ಸವದಲ್ಲಿ ಯಾರ್‌ಯಾರ ಉಪಸ್ಥಿತಿ?

**ಶ್ರವಣಬೆಳಗೊಳ** : ಗೊಮ್ಮಟೇಶ್ವರ ಭಗವಾನ್ ಶ್ರೀ ಬಾಹುಬಲಿ ಸ್ವಾಮಿಯ 88ನೇ ಮಹಾಮಸ್ತಕಾಭಿಷೇಕ ಮಹೋತ್ಸವ -2018ರ ಉದ್ಘಾಟನಾ ಸಮಾರಂಭವನ್ನು ಫೆ.7ರಂದು ಬೆಳಿಗ್ಗೆ 10.45 ಗಂಟೆಗೆ ಶ್ರೀಕ್ಷೇತ್ರ ಶ್ರವಣಬೆಳಗೊಳದಲ್ಲಿ ಏರ್ಪಡಿಸಲಾಗಿದ್ದು, ಶ್ರೀ 108 ವರ್ಧಮಾನಸಾಗರ ಮುನಿ ಮಹಾರಾಜರು ಹಾಗೂ ಇತರ ಆಚಾರ್ಯರುಗಳು ಮತ್ತು ತ್ಯಾಗಿಗಳು, ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ, ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರುಗಳು ಪಾವನ ಸಾನಿಧ್ಯ ವಹಿಸಲಿರುವರು.

ರಾಷ್ಟ್ರಪತಿ ರಾಮನಾಥ್ ಕೋವಿಂದ್, ಕರ್ನಾಟಕ ರಾಜ್ಯಪಾಲ ವಜುಬಾಯಿ ವಾಲಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಪ್ರಧಾನ ಮಂತ್ರಿ ಹಾಗೂ ಲೋಕಸಭಾ ಸದಸ್ಯ ಹೆಚ್.ಡಿ.ದೇವೇಗೌಡ, ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಪಶು ಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಎ.ಮಂಜು, ಮಹಾ ಮಸ್ತಕಾಭಿಷೇಕ ಸಮಿತಿ ರಾಜ್ಯ ಮಟ್ಟದ ಸಮಿತಿ ಸಹ ಅಧ್ಯಕ್ಷ ಕೆ.ಅಭಯಚಂದ್ರ ಜೈನ್, ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಬಿ.ಎಸ್.ಶ್ವೇತಾ ದೇವರಾಜ್, ಶಾಸಕರಾದ ಸಿ.ಎನ್.ಬಾಲಕೃಷ್ಣ, ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಎಸ್.ಪ್ರಕಾಶ್, ವೈ.ಎನ್.ರುದ್ರೇಶಗೌಡ, ಕೆ.ಎಂ. ಶಿವಲಿಂಗೇಗೌಡ, ವಿಧಾನ ಪರಿಷತ್ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಕೆ.ಟಿ.ಶ್ರೀಕಂಠೇಗೌಡ ಸೇರಿದಂತೆ ಇನ್ನಿತರ ಗಣ್ಯರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು.

> **"ರಾಷ್ಟ್ರಪತಿ ರಾಮನಾಥ್ ಕೋವಿಂದ್, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ವಿವಿಧ ಗಣ್ಯರು ಬುಧವಾರ ಬೆಳಿಗ್ಗೆ ಶ್ರವಣಬೆಳಗೊಳದಲ್ಲಿ ಮಹಾಮಸ್ತಕಾಭಿಷೇಕಕ್ಕೆ ಚಾಲನೆ ನೀಡಲಿದ್ದಾರೆ. ಅವರಿಗೆ ಸ್ವಾಗತ ಕೋರುತ್ತೇನೆ.**
> *-ಎ.ಮಂಜು, ಅಧ್ಯಕ್ಷರು, ಮಹಾ ಮಸ್ತಕಾಭಿಷೇಕ ಸಮಿತಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು.*

> **"ಮಹೋತ್ಸವಕ್ಕೆ ಎಲ್ಲಾ ರೀತಿಯ ತಯಾರಿ ನಡೆದಿವೆ. ಭದ್ರತೆ ಸೇರಿದಂತೆ ಎಲ್ಲಾ ಸಿದ್ಧತೆಗಳೂ ಪೂರೈಕೆಯಾಗಿವೆ. ಮಹಾ ಮಜ್ಜನಕ್ಕೆ ಭಕ್ತಾದಿಗಳು ಪಾಲ್ಗೊಳ್ಳಬೇಕು. ಈ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು.**
> *-ರೋಹಿಣಿ ಸಿಂಧೂರಿ, ಜಿಲ್ಲಾಧಿಕಾರಿ.*

### ಇದೇ ಪ್ರಪ್ರಥಮ ಭೇಟಿ

ದೇಶದ ಪ್ರಥಮ ಪ್ರಜೆ ರಾಮನಾಥ್ ಕೋವಿಂದ್ ಅವರು ಇದೇ ಪ್ರಪ್ರಥಮ ಬಾರಿಗೆ ಜಿಲ್ಲೆಗೆ ಆಗಮಿಸಲಿದ್ದಾರೆ. ಅವರು ವಿಶ್ವ ವಿಖ್ಯಾತ ಮಹಾ ಮಸ್ತಕಾಭಿಷೇಕಕ್ಕೆ ಚಾಲನೆ ನೀಡಲಿದ್ದಾರೆ. ರಾಷ್ಟ್ರಪತಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ಅವರು ಬೆಂಗಳೂರಿಗೆ ಬಂದಿದ್ದರು.

# ಬಿಗಿ ಪೊಲೀಸ್ ಬಂದೋಬಸ್ತ್ : ಭಾರೀ ಕಟ್ಟೆಚ್ಚರ

**ಶ್ರವಣಬೆಳಗೊಳ** : ಭಗವಾನ್ ಬಾಹುಬಲಿ ಸ್ವಾಮಿಯ 88ನೇ ಮಹಾ ಮಸ್ತಕಾಭಿಷೇಕ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಲು ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಬುಧವಾರ ಬೆಳಿಗ್ಗೆ 10.45ಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಶ್ರವಣಬೆಳಗೊಳದಲ್ಲಿ ಕಳೆದ ಎರಡು ದಿನದಿಂದಲೇ ಪೊಲೀಸರು ಬಿಗಿ ಬಂದೋಬಸ್ತ್ ಮಾಡಿದ್ದಾರೆ.

ಫೆ.7ರಂದು ಬೆಳಗ್ಗೆ ಬೆಂಗಳೂರಿನಿಂದ ಆಗಮಿಸುವ ರಾಷ್ಟ್ರಪತಿಗಳ ಸುರಕ್ಷತೆಗೆ ಈಗಾಗಲೇ 3000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳನ್ನು ನೇಮಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಶಹಾಪುರವಾಡ್ ತಿಳಿಸಿದ್ದಾರೆ.

ಬುಧವಾರ ಇಲ್ಲಿ ಖಾಸಗಿ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ. ಶ್ರವಣಬೆಳಗೊಳಕ್ಕೆ ಬರುವವರು ಬೆಳಗೊಳದ ಹೊರವಲಯದಲ್ಲಿ ಪೊಲೀಸ್ ಇಲಾಖೆ ಸೂಚಿಸಿರುವ ವಾಹನಗಳ ಪಾರ್ಕಿಂಗ್ ಸ್ಥಳದಲ್ಲಿ ವಾಹನಗಳನ್ನು ನಿಲ್ಲಿಸಿ, ಬಳಿಕ ಕೆ.ಎಸ್.ಆರ್.ಟಿ.ಸಿ. ಸಂಸ್ಥೆ ವ್ಯವಸ್ಥೆ ಮಾಡಿರುವ ಬಸ್‌ಗಳಲ್ಲಿ ಆಯ್ದ ಸ್ಥಳಗಳನ್ನು ತಲುಪಬಹುದಾಗಿದೆ.

2018ರ ಮಹಾ ಮಸ್ತಕಾಭಿಷೇಕವನ್ನು ಉದ್ಘಾಟಿಸಲು ಆಗಮಿಸಲಿರುವ ರಾಷ್ಟ್ರಪತಿಗಳು ಕಾರ್ಯಕ್ರಮ ಏರ್ಪಾಡು ಮಾಡಿರುವ ಚಾವುಂಡರಾಯ ಮಂಟಪದಲ್ಲಿ ಬೆಳಗ್ಗೆ 10.45ಕ್ಕೆ ಮಹಾಮಸ್ತಕಾಭಿಷೇಕಕ್ಕೆ ಚಾಲನೆ ನೀಡಲಿದ್ದಾರೆ.

ಸರಿ ಸುಮಾರು 7 ರಿಂದ 8 ಸಾವಿರ ಮಂದಿ ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆ ಮಾಡಲಾಗಿದ್ದು, ಅಡಿ ಅಡಿಗೆ ಪೊಲೀಸರ ನಿಯೋಜನೆ ಮಾಡಲಾಗಿದೆ. ರಾಷ್ಟ್ರಪತಿಗಳು ಆಗಮಿಸುವ ಮಾರ್ಗದುದ್ದಕ್ಕೂ ಪೊಲೀಸ್ ಬ್ಯಾರಿಕೇಡ್‌ಗಳನ್ನು ನಿರ್ಮಿಸಲಾಗುತ್ತಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ.

**ಪರಿಶೀಲನೆ** : ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಬೆಳಗ್ಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮ ನಡೆಯುವ ಚಾವುಂಡರಾಯ ಮಹಾ ಮಂಟಪಕ್ಕೆ ಆಗಮಿಸಿದ ಹಿರಿಯ ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್, ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಸೇರಿದಂತೆ ಹಿರಿಯ ಅಧಿಕಾರಿಗಳು, ಚಾರುಕೀರ್ತಿ ಭಟ್ಟಾರಕ ಮಹಾಸ್ವಾಮೀಜಿ ಅವರೊಂದಿಗೆ ಚರ್ಚೆ ನಡೆಸಿದರು.

ಈ ವೇಳೆ ವೇದಿಕೆಗೆ ಆಗಮಿಸುವ ರಾಷ್ಟ್ರಪತಿಗಳಿಗೆ ಸ್ವಾಗತ ಕೋರಲು ಮಠದ ವತಿಯಿಂದ ವ್ಯವಸ್ಥೆ ಮಾಡಿಕೊಡಲು ಸ್ವಾಮೀಜಿ ವಿನಂತಿಸಿದರಾದರೂ, ಅದಕ್ಕೆ ಭದ್ರತಾ ಜವಾಬ್ದಾರಿ ಹೊತ್ತಿರುವ ಅಧಿಕಾರಿಗಳು ಅವಕಾಶ ನೀಡಲು ನಿರಾಕರಿಸಿದರು.

ಅಲ್ಲದೇ ವೇದಿಕೆಯಲ್ಲಿ 11 ಮಂದಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಲಾಗಿದ್ದು, ಅವರುಗಳೊಂದಿಗೆ 30 ಮಂದಿ ಮುನಿಗಳು ಹಾಗೂ ಮಾತಾಜಿಗಳಿಗೆ ಅವಕಾಶ ಇರಲಿದೆ ಎನ್ನಲಾಗಿದೆ.

ಮಸ್ತಕಾಭಿಷೇಕ ಹಿನ್ನೆಲೆಯಲ್ಲಿ ಮಂಗಳವಾರ ಶ್ರವಣಬೆಳಗೊಳದಲ್ಲಿ ಬಂದೋಬಸ್ತ್ ಪರಿಶೀಲಿಸಿದ ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ಹಾಗೂ ಇನ್ನಿತರ ಪೊಲೀಸ್ ಅಧಿಕಾರಿಗಳು.

## 'ಸ್ವಯಂ ಸೇವೆಗೆ ವಯಸ್ಸಿಗಿಂತ ಮನಸ್ಸು ಮುಖ್ಯ'

**ಶ್ರವಣಬೆಳಗೊಳ** : ಸ್ವಯಂ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಲು ವಯಸ್ಸಿಗಿಂತ ಮನಸ್ಸು ಮುಖ್ಯ ಎಂದು ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಹೇಳಿದರು.

ಜೈನಕಾಶಿ ಶ್ರವಣಬೆಳಗೊಳದಲ್ಲಿ ಮಹಾಮಸ್ತಕಾಭಿಷೇಕದ ಅಂಗವಾಗಿ ನಿರ್ಮಾಣಗೊಂಡಿರುವ ಸ್ವಯಂ ಸೇವಾ ನಗರದಲ್ಲಿ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಮಂಗಳವಾರ ಆಯೋಜಿಸಿದ್ದ ರಾಜ್ಯ ಮಟ್ಟದ ಸ್ವಯಂ ಸೇವಾ ಶಿಬಿರವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಶಿಸ್ತು ಹಾಗೂ ಸಂಯಮಕ್ಕೆ ಮತ್ತೊಂದು ಹೆಸರು ಸ್ವಯಂ ಸೇವಾದಳ ಎಂದರು.

ಮಹಾಮಸ್ತಕಾಭಿಷೇಕ ಮಹೋತ್ಸವಕ್ಕೆ ಸ್ವಯಂ ಸೇವಾ ದಳವನ್ನು ನಿಯೋಜಿಸುವ ಮೂಲಕ ಪಿ.ಜಿ.ಆರ್.ಸಿಂಧ್ಯ ಅವರು ಕ್ಷೇತ್ರಕ್ಕೆ ಒಂದು ರೀತಿಯ ಶಕ್ತಿ ತುಂಬಿದ್ದಾರೆ ಎಂದು ಶ್ಲಾಘಿಸಿದರು.

ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ, ಶಾಸಕ ಸಿ.ಎನ್.ಬಾಲಕೃಷ್ಣ, ಮಹಾ ಮಸ್ತಕಾಭಿಷೇಕ ಮಹೋತ್ಸವದ ವಿಶೇಷಾಧಿಕಾರಿ ಬಿ.ಎನ್.ವರಪ್ರಸಾದ ರೆಡ್ಡಿ, ಐ.ಎ.ಎಸ್. ಅಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

☐ ಶ್ರವಣಬೆಳಗೊಳ

## ಫೆ.26ರವರೆಗೆ ಸಾಂಸ್ಕೃತಿಕ ಮಹೋತ್ಸವ

**ಶ್ರವಣಬೆಳಗೊಳ** : ಶತಮಾನದ ಎರಡನೇ ಮಸ್ತಕಾಭಿಷೇಕ ಉದ್ಘಾಟನೆಯಾಗುವ ದಿನ ಸಮೀಪಿಸುತ್ತಿದ್ದು, ಫೆ.7ರಿಂದ ಫೆ.26ರವರೆಗೆ ಒಟ್ಟು 20 ದಿನಗಳ ಕಾಲ ಸ್ಥಳೀಯ ಕಲಾವಿದರ ಜೊತೆಗೆ ನಾಡಿನ ದಿಗ್ಗಜರು ಹಾಗೂ ಅಂತರ ರಾಷ್ಟ್ರೀಯ ಕಲಾವಿದರಿಂದ ಶ್ರವಣಬೆಳಗೊಳದ ಚಾವುಂಡರಾಯ ಮಹಾವೇದಿಕೆಯಲ್ಲಿ ಸಾಂಸ್ಕೃತಿಕ ಮಹೋತ್ಸವವನ್ನು ಏರ್ಪಡಿಸಲಾಗಿದೆ.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಗೊಮ್ಮಟೇಶ್ವರ ಭಗವಾನ್ ಬಾಹುಬಲಿ ಮಹಾಮಸ್ತಕಾಭಿಷೇಕ-2018ರ ಪ್ರಯುಕ್ತ ಹಮ್ಮಿಕೊಂಡಿರುವ ಪ್ರಮುಖ ಕಾರ್ಯಕ್ರಮಗಳ ವಿವರ ಇಂತಿದೆ.

ಫೆ.7ರಂದು ಖ್ಯಾತ ಬಾಲಿವುಡ್ ಚಲನಚಿತ್ರ ಹಿನ್ನೆಲೆ ಗಾಯಕ ರೂಪೇಶ್ ಜೈನ್ ಅವರಿಂದ ಸಂಜೆ 6.30ಕ್ಕೆ ಹಿಂದಿ ಗೀತ ಗಾಯನ, ನಂತರ ಖ್ಯಾತ ಹಾಸ್ಯ ಕಲಾವಿದರಾದ ಪ್ರೊ. ಕೃಷ್ಣೇಗೌಡ ಮತ್ತು ತಂಡದ ವತಿಯಿಂದ ಹಾಸ್ಯೋತ್ಸವ, ರಾತ್ರಿ 8 ಗಂಟೆಯಿಂದ ಅಂತರ ರಾಷ್ಟ್ರೀಯ ಖ್ಯಾತಿಯ ಗಾಯಕ ವಿಜಯ್ ಪ್ರಕಾಶ್ ಮತ್ತು ತಂಡದಿಂದ ಸಂಗೀತ ರಸಸಂಜೆ, ಮಣಿಕಂಠ ಮತ್ತು ತಂಡದವರಿಂದ ನಾದಸ್ವರ, ಬೇಲೂರು ವೇಣುಗೋಪಾಲ್ ತಂಡದಿಂದ ಸಾಕ್ಸೋಫೋನ್, ಕು.ಚಾಂದನಿ ಲಕ್ಷ್ಮಣ್ ಮತ್ತು ತಂಡದಿಂದ ಭರತನಾಟ್ಯ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ.

ಫೆ.8ರಂದು ಖ್ಯಾತ ಚಲನಚಿತ್ರ ನಟ ಹಾಗೂ ಗಾಯಕಿ ಆಶಾ ಭಂಡಾರಿ ಅವರಿಂದ ಭರತನಾಟ್ಯ, ಬೆಂಗಳೂರು ಸುಗಮ ಸಂಗೀತ ತಂಡದವರಿಂದ ಹಾಗೂ ಯುವ ಗಾಯಕ ರವಿ ಮೂರೂರು ಅವರಿಂದ ಸುಗಮ ಸಂಗೀತ, ಹಾಸನದ ಶ್ರೀ ಸಿದ್ದರಾಮೇಶ್ವರ ಕಲಾ ಸಂಘದವರಿಂದ ನಾಟಕ ದೃಶ್ಯಾವಳಿ, ಶ್ರೀಮತಿ ಗಾಯತ್ರಿ ಮತ್ತು ತಂಡದವರಿಂದ ವಯೋಲಿನ್ ವಾದನ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ.

ಫೆ.9ರಂದು ಉಡುಪಿಯ ಗೌರಿಶಂಕರ್ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಮಹಿಳಾ ಯಕ್